ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಹೆಚ್ ಜೆ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ದಿನಾಂಕಃ14.10.2014 ರಂದು ಆದ ನೋಂದಾಯಿತ ವಿಲ್ ಯಾ ಮರಣ ಶಾಸನ ಪತ್ರದ ಅಸಲು ಪ್ರತಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-1 ಎಂದು, ವಂಶವೃಕ್ಷವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-2 ಎಂದು, ಮರಣ ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿ-3 ಎಂದು, ದಿನಾಂಕಃ28.02.1958 ರಂದು ಆದ ನೋಂದಾಯಿತ ಕ್ರಯಪತ್ರದ ಅಸಲು ಪ್ರತಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-4 ಎಂದು, ದಿನಾಂಕಃ01.05.1961 ರಂದು ಆದ ನೋಂದಾಯಿತ ಕ್ರಯಪತ್ರದ ಅಸಲು ಪ್ರತಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-5 ಎಂದು, ಎಂ ಆರ್ ಹೆಚ್ 39/2013-14 ಅನ್ನು ಹಾಜರು ಮಾಡಿದ್ದು ನಿಪಿ-6 ಎಂದು, ದಾವಾ ಆಸ್ತಿಗೆ ಸಂಬಂಧಪಟ್ಟಂತೆ 2013-14 ನೇ ಸಾಲಿನಿಂದ 2023-24 ನೇ ಸಾಲಿನವರೆಗಿನ ಪಹಣಿ ಪತ್ರಿಕೆಗಳನ್ನು ಹಾಜರು ಮಾಡಿದ್ದು ಅವುಗಳನ್ನು ಒಟ್ಟಾಗಿ ನಿಪಿ-7 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.